# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **234**
ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್.ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : **15.02.2023.**
ಉತ್ತರಿಸುವ ಸಚಿವರು : ಕಂದಾಯ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕರಾವಳಿ ಭಾಗದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಅನಾದಿಕಾಲದಿಂದ ಅನುಭವಿಸಿಕೊಂಡು ಬರುತ್ತಿದ್ದ ಕಾನೆ, ಬಾನೆ, ಕುಮ್ಕಿ ಹೊಂದಿರುವ ಖದೀಮ್ ವರ್ಗದಾರರಿಗೆ ಕಾನೂನು ನಿಯಮಾವಳಿ ರೂಪಿಸಿ ಕುಮ್ಕಿಯನ್ನು ಸಕ್ರಮೀಕರಣಗೊಳಿಸಲಾಗುವುದೇ; | ಕರ್ನಾಟಕ ಭೂ ಕಂದಾಯ ಅಧಿನಿಯ, 1964ರ ಕಲಂ 79(2)ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಕುಮ್ಕಿ ಭೂಮಿಗಳು, ಬಾಣೆ ಭೂಮಿಗಳು ಮತ್ತು ಕಾಣೆ ಭೂಮಿಗಳು, ಉತ್ತರ ಕನ್ನಡ ಜಿಲ್ಲೆಯಲ್ಲಿನ ಬೆಟ್ಟ ಭೂಮಿಗಳು ಮತ್ತು ಹಾಡಿ ಭೂಮಿಗಳು, ಮೈಸೂರು ಪ್ರದೇಶದಲ್ಲಿನ ಕಾನು ಮತ್ತು ಸೊಪ್ಪಿನ ಬೆಟ್ಟ ಭೂಮಿಗಳು, ಕೊಡಗಿನ ಜಮ್ಮಾ ಮತ್ತು ಬಾಣೆ ಭೂಮಿಗಳು ಮತ್ತು ಹೈದರಬಾದ್ ಪ್ರದೇಶದಲ್ಲಿನ (ಮೋಟಸ್ಥಲ್ ತರಿ ಭೂಮಿಗಳು) (Motasthal wet lands) ಇವುಗಳ ಬಗೆಗಿನ ವಿಶೇಷಾಧಿಕಾರಗಳು ಮುಂದುವರಿಯತಕ್ಕದ್ದು ಎಂದು ತಿಳಿಸಲಾಗಿದೆ.<br><br>ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಸಂಶಾ 01 ಸಿ.ಎಸ್.ಸಿ. 2022 ದಿನಾಂಕ: 29.01.2022ರಲ್ಲಿ ಗೋಮಾಳ, ಗಾಯರಾಣ, ಹುಲ್ಲುಬನ್ನಿ, ಸೊಪ್ಪಿನಬೆಟ್ಟ ಇತ್ಯಾದಿ ಗ್ರಾಮೀಣ ಪ್ರದೇಶದ ಸರ್ಕಾರಿ ಜಮೀನುಗಳನ್ನು ಮಂಜೂರು ಮಾಡುವ ಕುರಿತು ಒಂದು ನೀತಿಯನ್ನು ರೂಪಿಸುವ ಸಲುವಾಗಿ ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ರಚಿಸಲಾಗಿದ್ದು ಸದರಿ ಸಮಿತಿಯ ಅಂತಿಮ ನಿರ್ಣಯದಂತೆ ಕ್ರಮವಹಿಸಲಾಗುವುದು. |
| ಆ) | ಸದರಿ ವಿಚಾರ ಕುರಿತು ಕಂದಾಯ ಇಲಾಖೆ ಇದುವರೆವಿಗೆ ಯಾವೆಲ್ಲಾ ಕ್ರಮಗಳನ್ನು ತೆಗೆದುಕೊಂಡಿದೆ ಹಾಗೂ ಈ ಸಂಬಂಧ ಖದೀಮ್ ವರ್ಗದಾರರಿಗೆ ನ್ಯಾಯ ಒದಗಿಸಲಾಗಿದೆಯೇ; | |
| ಇ) | ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆಗೆ ಎಷ್ಟು ಭೂಮಿ ವರ್ಗಾವಣೆಯಾಗಬೇಕಾಗಿತ್ತು ಮತ್ತು ಸದರಿ ಭೂಮಿ ಈಗಾಗಲೇ ಕಂದಾಯ ಇಲಾಖೆಯ ಸುಪರ್ದಿಗೆ ಬಂದಿದೆಯೇ; | ಮಂಗಳೂರು ವೃತ್ತದಲ್ಲಿ ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆಗೆ ವರ್ಗಾಯಿಸುವಂತಹ ಅರಣ್ಯ ಭೂಮಿ ಇರುವುದಿಲ್ಲ. |
| ಈ) | ಇದುವರೆಗೆ ಬಂದಿರದಿದ್ದಲ್ಲಿ ಸದರಿ ಭೂಮಿ ವರ್ಗಾವಣೆ ಪ್ರಕ್ರಿಯೆ ಯಾವ ಹಂತದಲ್ಲಿದೆ; | ಪ್ರಶ್ನೆ ಉದ್ಭವಿಸುವುದಿಲ್ಲ. |
| ಉ) | ಯಾವ ಕಾಲಮಿತಿಯೊಳಗೆ ಅರಣ್ಯ ಇಲಾಖೆಯಿಂದ ಕಂದಾಯ ಇಲಾಖೆಗೆ ಸದರಿ ಭೂಮಿ ವರ್ಗಾವಣೆಯಾಗಲಿದೆ? | |

ಸಂಖ್ಯೆ: ಆರ್‌ಡಿ 22 ಎಲ್‌ಜಿಕ್ಯೂ 2023

**(ಆರ್.ಅಶೋಕ)**
ಕಂದಾಯ ಸಚಿವರು